RNU AIR DHARWAD

APRIL 27, 2025

AKASHAVANI - DHARWAD

PRADESH SAAMACHARA (KANNADA) 7.05 A.M

ಮುಖ್ಯಾಂಶಗಳು

- ದೇಶವನ್ನು ಪ್ರಗತಿ ಪಥದತ್ತ ಕೊಂಡೊಯ್ಯುವಂತೆ ಯುವ ಅಧಿಕಾರಿಗಳಿಗೆ ಕೇಂದ್ರ ಸಚಿವ ಡಾಕ್ಟರ್ ವೀರೇಂದ್ರಕುಮಾರ್ ಕರೆ.
- ರಾಷ್ಟ್ರೀಯ ಸುರಕ್ಷತೆ ಹಿತದೃಷ್ಟಿಯಿಂದ ಭದ್ರತಾ ಪಡೆಗಳ ಚಲನ–ವಲನ ನೇರಪ್ರಸಾರ ಮಾಡದಂತೆ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯ ಮಾಧ್ಯಮಗಳಿಗೆ ಸೂಚನೆ.
- ಇಂದು ಬೆಳಗ್ಗೆ 11 ಗಂಟೆಗೆ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಮನದ ಮಾತು '[ಮನ್ ಕಿ ಬಾತ್'.
- ಬಸವ ಜಯಂತಿಯ ಹಿನ್ನೆಲೆ ರಾಜ್ಯಾದ್ಯಂತ ಪ್ರವಾಸ ಕೈಗೊಂಡ 'ಅನುಭವ ಮಂಟಪ–ಬಸವಾದಿ ಶರಣರ ವೈಭವ' ರಥಯಾತ್ರೆ ಇಂದು ಧಾರವಾಡಕ್ಕೆ ಆಗಮನ.

ಈಗ ವಾರ್ತೆಗಳ ವಿವರ

ಕೇಂದ್ರ ಸರ್ಕಾರದ ವಿವಿಧ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ದೇಶಾದ್ಯಂತ ನಿನ್ನೆ ನಡೆದ ಬೃಹತ್ ಉದ್ಯೋಗ ಮೇಳದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು 51 ಸಾವಿರಕ್ಕೂ ಅಧಿಕ ಉದ್ಯೋಗಿಗಳಿಗೆ ನೇಮಕಾತಿ ಪತ್ರವನ್ನು ವರ್ಚುವಲ್ ಮೂಲಕ ವಿತರಿಸಿದರು. ಬೆಂಗಳೂರಿನಲ್ಲೂ ಈ ಕಾರ್ಯಕ್ರಮದ ನೇರ ಪ್ರಸಾರ ಆಯೋಜಿಸಲಾಗಿತ್ತು. ಈ ವೇಳೆ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ಸಚಿವ ಡಾಕ್ಟರ್ ವೀರೇಂದ್ರಕುಮಾರ್, ಕೇಂದ್ರ ಸರ್ಕಾರದ ವಿವಿಧ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಪತ್ರವನ್ನು ನೀಡಿದರು. ನಂತರ ಮಾತನಾಡಿದ ಸಚಿವರು, ಕೇಂದ್ರ ಸರ್ಕಾರದ ವಿವಿಧ ಇಲಾಖೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ದೇಶದ, 47 ಕಡೆ 51 ಸಾವಿರಕ್ಕೂ ಅಧಿಕ ನೇಮಕಾತಿ ಪತ್ರವನ್ನು ನೀಡಲಾಗಿದೆ. ಉದ್ಯೋಗ ಮೇಳದಲ್ಲಿ ಇದುವರೆಗೂ, 9 ಲಕ್ಷಕ್ಕೂ ಅಧಿಕ ಉದ್ಯೋಗ ನೀಡುವ ಮೂಲಕ ಯುವ ಜನರಿಗೆ ಉದ್ಯೋಗ ದೊರಕಿಸಿ ಕೊಡಲಾಗಿದೆ. ವಿಕಸಿತ ಭಾರತ ನಿರ್ಮಾಣದಲ್ಲಿ ಯುವ ಅಧಿಕಾರಿಗಳ ಪಾತ್ರ ಹಿರಿದಾಗಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ದೇಶದ ಎಲ್ಲ ವಲಯಗಳು ಪ್ರಗತಿಯತ್ತ ಮುನ್ನಡೆಯುತ್ತಿದೆ. ಉದ್ಯೋಗ ಪಡೆದಿರುವ ಯುವ ಜನರು ದೇಶದ ಅಭಿವೃದ್ಧಿಯಲ್ಲಿ ಕೈಜೋಡಿಸಬೇಕು ಎಂದರು.

<><><>

ರಾಷ್ಟ್ರೀಯ ಸುರಕ್ಷತೆ ಮತ್ತು ಭದ್ರತೆಯ ಹಿತದೃಷ್ಟಿಯಿಂದ, ಭಯೋತ್ಪಾದನಾ ವಿರೋಧಿ ಕಾರ್ಯಾಚರಣೆಗಳು ಮತ್ತು ಭದ್ರತಾ ಪಡೆಗಳ ಚಲನ–ವಲನಗಳನ್ನು ನೇರಪ್ರಸಾರ ಮಾಡದಂತೆ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯ ಮಾಧ್ಯಮಗಳಿಗೆ ಸೂಚಿಸಿದೆ. ರಾಷ್ಟ್ರೀಯ ಭದ್ರತೆ ಕಾಪಾಡುವಲ್ಲಿ ಮಾಧ್ಯಮಗಳು ಹಾಗೂ ಡಿಜಿಟಲ್ ವೇದಿಕೆಗಳು ಪ್ರಮುಖ ಪಾತ್ರ ವಹಿಸುತ್ತವೆ. ದೇಶದ ಪ್ರತಿಯೊಬ್ಬ ಪ್ರಜೆಯೂ ಸಹ ಇದರಲ್ಲಿ ಮಹತ್ವದ ಪಾತ್ರ ವಹಿಸುತ್ತಾರೆ. ರಕ್ಷಣಾ ಕಾರ್ಯಾಚರಣೆಗಳು ಅಥವಾ ಭದ್ರತಾ ಪಡೆಗಳ ಚಟುವಟಿಕೆಗಳಿಗೆ ಸಂಬಂಧಿಸಿದ ಸೂಕ್ಷ್ಮ ಮಾಹಿತಿಯನ್ನು ಅಕಾಲಿಕವಾಗಿ ಬಹಿರಂಗ ಪಡಿಸುವುದು ಸರಿಯಲ್ಲ. ಅಜಾಗರೂಕತೆಯಿಂದ ಪ್ರತಿಕೂಲ ಪರಿಣಾಮ ಉಂಟಾಗಬಹುದು ಮತ್ತು ಕಾರ್ಯಾಚರಣೆಯ ಸಾಮರ್ಥ್ಯ ಮತ್ತು ಸಿಬ್ಬಂದಿಗೆ ಸುರಕ್ಷತೆಗೆ ಅಪಾಯ ಎದುರಾಗಬಹುದು ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ. ಭದ್ರತಾ ಪಡೆಗಳ ಯಾವುದೇ ಭಯೋತ್ಪಾದನಾ ವಿರೋಧಿ ಕಾರ್ಯಾಚರಣೆಗಳ ನೇರಪ್ರಸಾರವನ್ನು ಕೇಬಲ್ ಟೆಲಿವಿಷನ್ ನೆಟ್‌ವರ್ಕ್ ತಿದ್ದುಪಡಿ ನಿಯಮಗಳು ನಿರ್ಬಂಧಿಸುತ್ತವೆ.

<><><>

ಆಕಾಶವಾಣಿಯ ಜನಪ್ರಿಯ ಮಾಸಿಕ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಬೆಳಗ್ಗೆ 11 ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್ ಕಾರ್ಯಕ್ರಮದ 121ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆ್ಯಪ್‌ನಲ್ಲಿ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾ ʼಗಳಲ್ಲಿ ಕಾರ್ಯಕ್ರಮ ಮೂಡಿಬರಲಿದೆ.

<><><>

ವಿಶ್ವಗುರು ಬಸವಣ್ಣನವರ ಜಯಂತಿ ಅಂಗವಾಗಿ ಕೂಡಲ ಸಂಗಮದಲ್ಲಿ ಬಸಣ್ಣನವರ ತತ್ವ, ಸಂದೇಶಗಳನ್ನು ಪ್ರಚುರಪಡಿಸುವ ನಿಟ್ಟಿನಲ್ಲಿ ಎರಡು ದಿನಗಳ ಕಾಲ ಅನುಭವ ಮಂಟಪ-ಬಸವಾದಿ ಶರಣರ ವೈಭವ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಅಬಕಾರಿ ಖಾತೆ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದ್ದಾರೆ. ಬಾಗಲಕೋಟೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಾಂಸ್ಕೃತಿಕ ವೈಭವದಲ್ಲಿ ಮೊದಲ ದಿನ ಎಪ್ರೀಲ್ 29 ರಂದು ವಚನ ಸಾಹಿತ್ಯ ಸಮಕಾಲಿನ ಸಂವೇದನೆ ಕುರಿತು ವಿಚಾರಗೋಷ್ಠಿ ನಡೆಯಲಿವೆ. 30 ರಂದು ಬೆಳಿಗ್ಗೆ 11 ಗಂಟೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬಸವ ರಾಷ್ಟ್ರೀಯ ಪುರಸ್ಕಾರ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ಅಂದು ಬೆಳಿಗ್ಗೆ ಕೂಡಲಸಂಗಮೇಶ್ವರ ದೇವಸ್ಥಾನದಿಂದ ಸಭಾ ಮಂಟಪದವರೆಗೆ ವಿವಿಧ ಜಾನಪದ ಕಲಾತಂಡಗಳ ಮೆರವಣಿಗೆ ಹಾಗೂ ಎರಡು ದಿನಗಳ ಕಾಲ ಸಂಜೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ ಎಂದು ತಿಳಿಸಿದರು.

<><><>

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬಾಗಲಕೋಟೆ ಜಿಲ್ಲಾಡಳಿತ ಹಾಗೂ ಕೂಡಲ ಸಂಗಮ ಅಭಿವೃದ್ಧಿ ಪ್ರಾಧಿಕಾರದ ಸಹಯೋಗದಲ್ಲಿ ಬಸವ ಜಯಂತಿಯ ಅಂಗವಾಗಿ, ರಾಜ್ಯಾದ್ಯಂತ ಪ್ರವಾಸ ಕೈಗೊಂಡ ‘ಅನುಭವ ಮಂಟಪ-ಬಸವಾದಿ ಶರಣರ ವೈಭವ’ ರಥಯಾತ್ರೆಯು ಇಂದು ಧಾರವಾಡಕ್ಕೆ ಆಗಮಿಸಲಿದ್ದು ಜಿಲ್ಲಾಡಳಿತ ಸ್ವಾಗತಿಸಲು ಸಿದ್ಧವಾಗಿದೆ.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಆಕಾಶವಾಣಿ ಸುದ್ದಿಗಳಿಗಾಗಿ, ನಮ್ಮ X ಖಾತೆ @airnews_dharwad ಹಾಗೂ

ನಮ್ಮ ಫೇಸ್ಬುಕ್ ಖಾತೆ Airrnu Dharwad ಅನುಸರಿಸಿ.

<><><>

ದಾವಣಗೆರೆ ಜಿಲ್ಲೆ, ಆದರ್ಶ ಯೋಗ ಪ್ರತಿಷ್ಠಾನ, ಶ್ರೀ ಮಹಾಮಾಯಿ ವಿಶ್ವಯೋಗ ಮಂದಿರ ಹಾಗೂ ಯೋಗ ಚಿಕಿತ್ಸಾ ಕೇಂದ್ರದ ಮ್ಯಾನೇಜಿಂಗ್ ಟ್ರಸ್ಟಿ ಡಾಕ್ಟರ ರಾಘವೇಂದ್ರ ಗುರೂಜಿ ಅವರಿಗೆ, ನವದೆಹಲಿಯ ಕೇಂದ್ರ ಸೂಕ್ಷ್ಮ, ಸಣ್ಣ, ಮತ್ತು ಮಧ್ಯಮ ಕೈಗಾರಿಕೆ ಇಲಾಖೆಯಿಂದ ಮಾನ್ಯತೆ ಪಡೆದ ಲೆಜೆಂಡರಿ ಪೀಸ್ ಕೌನ್ಸಿಲ್ ಕೊಡಮಾಡುವ ‘ಪಿನಾಕಲ್ 2025’ ಪ್ರಶಸ್ತಿ ಪ್ರದಾನಿಸಿ ಗೌರವಿಸಲಾಯಿತು. ಯೋಗ ಕ್ಷೇತ್ರದಲ್ಲಿ ಕಳೆದ 47 ವ ʼಗಳಿಂದ ಸಾಧನೆ ಮಾಡಿ, ಹಲವು ಯೋಗ ಶಿಬಿರಗಳನ್ನು ಆಯೋಜಿಸಿರುವ ಉಡುಪಿ ಮೂಲದ ರಾಘವೇಂದ್ರ ಗುರೂಜಿಯವರು ಪ್ರದೇಶ ಸಮಾಚಾರದೊಂದಿಗೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

ಧ್ವನಿ- ರಾಘವೇಂದ್ರ ಗುರೂಜಿ ( 67 ಸೆಕೆಂದುಗಳು)

<><><>

ಕರ್ನಾಟಕ ಉಚ್ಚ ನ್ಯಾಯಾಲಯದ ಧಾರವಾಡ ಪೀಠದಲ್ಲಿ ನಿನ್ನೆ ಹಿರಿಯ ನ್ಯಾಯಮೂರ್ತಿ ಎಸ್.ಜಿ. ಪಂಡಿತ ಅವರ ನೇತೃತ್ವದಲ್ಲಿ ವಿಶೇ ´ ಲೋಕ ಅದಾಲತ್ ಆಯೋಜಿಸಲಾಗಿತ್ತು. ಲೋಕ ಅದಾಲತಿನಲ್ಲಿ ಅಪಘಾತ ಪರಿಹಾರ ಪ್ರಕರಣಗಳ ಜೊತೆಗೆ ವಿಶೇ ´ವಾಗಿ ಚೆಕ್ ಅಮಾನ್ಯ ಪ್ರಕರಣಗಳ ಮೇಲ್ಮನವಿಗಳು ಸಿವಿಲ್ ಪ್ರಕರಣಗಳು, ರಿಟ್ ಅರ್ಜಿಗಳು ಸೇರಿದಂತೆ ಸುಮಾರು ವ ´ಗಳಿಂದ ಇತ್ಯರ್ಥವಾಗದ ಪ್ರಕರಣಗಳನ್ನು ಇತ್ಯರ್ಥಗೊಳಿಸುವ ಮೂಲಕ ಉಭಯ ಪಕ್ಷಗಾರರ ಪರಸ್ಪರ ಸಂಬಂಧಗಳನ್ನು ಉತ್ತಮವಾಗಿ, ಸೌಹಾರ್ದಯುತವಾಗಿ 'ಎಲ್ಲರಿಗೂ ನ್ಯಾಯ' ಎಂಬ ಧ್ಯೇಯ ವಾಕ್ಯದಂತೆ ಸರಳ ರೀತಿಯಲ್ಲಿ ನ್ಯಾಯಾಲಯಕ್ಕೆ ಬಂದ ಕಕ್ಷಿದಾರರಿಗೆ ನ್ಯಾಯ ದೊರಕಿಸಿಕೊಡಲಾಯಿತು. ಆದಾಲತನಲ್ಲಿ ಒಟ್ಟು 1 ಸಾವಿರದ 274 ಪ್ರಕರಣಗಳನ್ನು ಕೈಗೆತ್ತಿಕೊಳ್ಳಲಾಗಿತ್ತು. ಆ ಪೈಕಿ ಒಟ್ಟು 173 ಪ್ರಕರಣಗಳನ್ನು ಇತ್ಯರ್ಥಪಡಿಸಲಾಯಿತು ಎಂದು ಉಚ್ಛ ನ್ಯಾಯಾಲಯ ಕಾನೂನು ಸೇವಾ ಸಮಿತಿ ಧಾರವಾಡ ಪೀಠದ ಕಾರ್ಯದರ್ಶಿ ಜೆರಾಲ್ಡ್ ರುಡಾಲ್ಫ್ ಮೆಂಡೋನ್ಸಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><>

ಮಾನಸಿಕ ಒತ್ತಡ ನಿವಾರಣೆಗೆ ಕ್ರೀಡೆ ಸಹಕಾರಿಯಾಗಲಿದ್ದು, ಆರೋಗ್ಯ ವರ್ಧನೆಗೆ ಕ್ರೀಡಾ ಮನೋಭಾವನೆ ಬೆಳೆಸಿಕೊಳ್ಳಬೇಕು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಬೆಳಗಾವಿ ವಿಭಾಗೀಯ ಸಹ ನಿರ್ದೇಶಕರಾದ ಡಾಕ್ಟರ್ ಪುಷ್ಪಾ ಎಚ್.ಆರ್ ಹೇಳಿದ್ದಾರೆ. ಕರ್ನಾಟಕ ರಾಜ್ಯ ಸರ್ಕಾರಿ ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿಗಳ ಕೇಂದ್ರ ಸಂಘ ಬೆಂಗಳೂರು, ಧಾರವಾಡ ಜಿಲ್ಲಾ ಘಟಕ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಧಾರವಾಡದಲ್ಲಿ ಆಯೋಜಿಸಲಾದ ಜಿಲ್ಲಾಮಟ್ಟದ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು. ಇದೇ ಸಂದರ್ಭದಲ್ಲಿ, ಕರ್ನಾಟಕ ರಾಜ್ಯ ಸರ್ಕಾರಿ ಪ್ರಯೋಗಶಾಲಾ ತಾಂತ್ರಿಕಾಧಿಕಾರಿಗಳ ಸಂಘದ ಧಾರವಾಡ ಜಿಲಾಧ್ಯಕ್ಷ ದೇವಿದಾಸ ಶಾಂತಿಕರ ಅವರು ನೀಡಿದ, ಬೇಡಿಕೆಗಳ ಈಡೇರಿಕೆಗೆ ಪ್ರಾಮಾಣಿಕವಾಗಿ ಪ್ರಯತ್ನಿಸಲಾಗುವುದು ಎಂದರು. ಸರ್ಕಾರದ ಆದೇಶದಂತೆ ವಿವಿಧ ಹುದ್ದೆಗಳ ಭರ್ತಿಗೆ ಕ್ರಮ ಕೈಗೊಳ್ಳಲಾಗುವುದು ಎಂದು ಬೆಳಗಾವಿ ವಿಭಾಗೀಯ ಸಹ ನಿರ್ದೇಶಕರ ಕಚೇರಿಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಉಪ ನಿರ್ದೇಶಕರಾದ ಡಾಕ್ಟರ್ ಎಂ.ಎಸ್.ಪಲ್ಲೇದ ತಿಳಿಸಿದರು. ಧಾರವಾಡ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾಕ್ಟರ್ ಎಸ್.ಎಂ.ಹೊನಕೇರಿ ಮಾತನಾಡಿ, ಮಾನಸಿಕ ಒತ್ತಡವನ್ನು ನಿಯತ್ರಿಸುವ ಯೋಗ, ಧ್ಯಾನವನ್ನು ದಿನ ನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ನಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳೋಣ ಹಾಗೂ ಎಲ್ಲರೂ ಒಟ್ಟಾಗಿ ಸರ್ಕಾರಿ ಕರ್ತವ್ಯ ನಿಭಾಯಿಸುವ ಮೂಲಕ ಧಾರವಾಡ ಜಿಲ್ಲೆಯನ್ನು ಪ್ರಗತಿ ಪಥದತ್ತ ಸಾಗಿಸೋಣ ಎಂದರು. ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಧಾರವಾಡ ಜಿಲ್ಲಾಧ್ಯಕ್ಷ ಎಸ್.ಎಫ್.ಸಿದ್ಧನಗೌಡರ, ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿಗಳ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾಕ್ಟರ್ ಮಂಜುನಾಥ ಎಸ್, ಜಿಲ್ಲಾ ಕುಷ್ಠ ರೋಗ ನಿಯಂತ್ರಣಾಧಿಕಾರಿ ಡಾಕ್ಟರ್ ಎಸ್.ಬಿ.ಕಳಸೂರಮಠ, ಜಿಲ್ಲಾ ಸಮೀಕ್ಷಣಾಧಿಕಾರಿ ಡಾಕ್ಟರ್ ಪರಶುರಾಮ ಎಫ್.ಕೆ, ಜಿಲ್ಲಾ ಕ್ಷಯ ರೋಗ ನಿಯಂತ್ರಣಾಧಿಕಾರಿ ಡಾಕ್ಟರ್ ರವೀಂದ್ರ ಭೋವೆರ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

<><><>